ಎಂಟನೇ ಪಂಚವಾರ್ಷಿಕ ಯೋಜನೆಯಲ್ಲಿ ಅರಣ್ಯ ಸಂಪತ್ತಿನ ಕಳ್ಳ ಸಾಗಾಣಿಕೆಯನ್ನು ತಡೆಯಲು ಇದನ್ನು ಹೆಚ್ಚಿನ ಕಾರ್ಯಕ್ರಮಗಳನ್ನು ಹಾಕಿಕೊಂಡಿದ್ದು ಈಗಾಗಲೇ ಭಾರತ ಸರ್ಕಾರಕ್ಕೆ ಸುಮಾರು 500 ಲಕ್ಷ ರೂಪಾಯಿಗಳ ಯೋಜನೆಯನ್ನು ಕಳುಹಿಸಿಕೊಡಲಾಗಿದೆ. ಅರಣ್ಯ ನೀತಿಯಲ್ಲಿ ಸಹ ಅರಣ್ಯನಾಶ ತಡೆಯಲು ಮುಖ್ಯವಾದ ರೂಪು ರೇಷೆಗಳನ್ನು ಅಳವಡಿಸಲಾಗಿದೆ.

ಮುಖ್ಯವಾಗಿ ಕರ್ನಾಟಕ ರಾಜ್ಯದಲ್ಲಿ ಶ್ರೀಗಂಧದ ಕಳ್ಳ ಸಾಗಾಣಿಕೆಯು ಸಂಪೂರ್ಣವಾಗಿ ತಡೆಗಟ್ಟಬೇಕಾದರೆ ಪಕ್ಕದ ರಾಜ್ಯ ಕೇರಳದಲ್ಲಿ ಸಹ ಕರ್ನಾಟಕ ರಾಜ್ಯದಷ್ಟೇ ಬಿಗಿಯಾಗಿರತಕ್ಕ ಕಾಯ್ದೆಯ ವ್ಯವಸ್ಥೆಯಾಗಬೇಕು. ಇದಕ್ಕಾಗಿ ಒಂದು ಸಮಗ್ರ ಕಾಯಿದೆಯನ್ನು ರೂಪಿಸಿ ದಕ್ಷಿಣ ಭಾರತದ ಎಲ್ಲಾ ರಾಜ್ಯಗಳಿಗೂ ಅನ್ವಯಿಸುವಂತೆ ಭಾರತ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಲಾಗಿದೆ.

ವಲಯ ಅರಣ್ಯ ಅಧಿಕಾರಿಗಳ ಸ್ಪರ್ಧಾತ್ಮಕ ಪರೀಕ್ಷೆ

166 - ಶ್ರೀ ಹೆಚ್.ಎಂ. ರೇವಣ್ಣ (ಮಾಗಡಿ) : ಮಾನ್ಯ ಅರಣ್ಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅರಣ್ಯ ಇಲಾಖೆಯಲ್ಲಿರುವ ಖಾಲಿ ಇರುವ ಸೇವಕರು ಸಹಾಯಕರು ಮತ್ತು ವಲಯ ಅರಣ್ಯ ಅಧಿಕಾರಿಗಳ ಹುದ್ದೆಗಳೆಷ್ಟು?

ಆ) ವಲಯ ಅರಣ್ಯ ಅಧಿಕಾರಿಗಳ ಹುದ್ದೆಗಳಿಗಾಗಿ ನಡೆಸುತ್ತಿದ್ದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಕಳೆದ ಮೂರು ವರ್ಷಗಳಿಂದ ನಡೆಸಿಲ್ಲದಿರುವುದು ನಿಜವೇ?

ಇ) ಹಾಗಿದ್ದಲ್ಲಿ, ಅದಕ್ಕೆ ಕಾರಣಗಳೇನು? ಹಾಗೂ ಈ ಹುದ್ದೆಗಳ ಪರೀಕ್ಷೆಗಳನ್ನು ಯಾವಾಗ ನಡೆಸಲಾಗುವುದು?

ಶ್ರೀ ಇ.ಟಿ. ಶಂಭುನಾಥ್ (ರಾಜ್ಯ ಅರಣ್ಯ ಸಚಿವರು) :

ಅ) ಈ ಇಲಾಖೆಯಲ್ಲಿ ಸದ್ಯಕ್ಕೆ ಖಾಲಿ ಇರುವ ಹುದ್ದೆಗಳು ಈ ಕೆಳಗಿನಂತಿವೆ.

1. ವಲಯ ಅರಣ್ಯಾಧಿಕಾರಿಗಳು 7
2. ವನಪಾಲಕರು 8
3. ಅರಣ್ಯ ರಕ್ಷಕರು 240
4. ಅರಣ್ಯ ವೀಕ್ಷಕರು 182
5. ಪ್ರಥಮ ದರ್ಜೆ ಸಹಾಯಕರು -
6. ದ್ವಿತೀಯ ದರ್ಜೆ ಸಹಾಯಕರು -

ಆ) ವಲಯ ಅಧಿಕಾರಿಗಳ ಹುದ್ದೆಗೆ ಸ್ಪರ್ಧಾತ್ಮಕ ಪರೀಕ್ಷೆಗಳನ್ನು 1988,89 ಮತ್ತು 90 ರ ಸಾಲಿನಲ್ಲಿ ನಡೆಸಲಾಗಿದೆ.

ಇ) ಉದ್ಭವಿಸುವುದಿಲ್ಲ

ಬೀದರ್ ಜಿಲ್ಲೆಯಾದ್ಯಂತ ಅರಣ್ಯ ಇಲಾಖೆಯಲ್ಲಿ ದಿನಗೂಲಿ ಆಧಾರದ ಮೇಲೆ ಕೆಲಸ ಮಾಡುತ್ತಿರುವವರನ್ನು ತೆಗೆದುಹಾಕಿರುವ ಬಗ್ಗೆ

638 - ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) : ಮಾನ್ಯ ಅರಣ್ಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಬೀದರ್ ಜಿಲ್ಲೆಯಾದ್ಯಂತ ಅರಣ್ಯ ಇಲಾಖೆಯಲ್ಲಿ ದಿನಗೂಲಿ ಆಧಾರದ ಮೇಲೆ ತಾತ್ಕಾಲಿಕವಾಗಿ ಕೆಲಸ ಮಾಡುತ್ತಿದ್ದ ನೌಕರರ ಸಂಖ್ಯೆ ಎಷ್ಟು? (ತಾಲ್ಲೂಕುವಾರು ವಿವರಗಳನ್ನು ನೀಡುವುದು)

2) ಇವರ ಪೈಕಿ 240 ದಿನಗಳಿಂದ ಕೆಲಸ ಮಾಡುತ್ತಿರುವವರ ಸಂಖ್ಯೆ ಎಷ್ಟು? ಹಾಗೂ ಉಳಿದವರ ಸಂಖ್ಯೆ ಎಷ್ಟು?

3) ಇತ್ತೀಚೆಗೆ ಅರಣ್ಯ ಇಲಾಖೆಯಲ್ಲಿ ಕೆಲಸ ಮಾಡುತ್ತಿದ್ದ ಮೇಲ್ಕಂಡ ಎಷ್ಟು ನೌಕರರನ್ನು ಕೆಲಸದಿಂದ ತೆಗೆದುಹಾಕಲಾಯಿತು?

4) ಸರ್ಕಾರ ಯಾವ ಕಾರಣದಿಂದ ಈ ಬಡ ನೌಕರರನ್ನು ಕೆಲಸದಿಂದ ತೆಗೆದುಹಾಕಿದೆ?

5) ತೆಗೆದುಹಾಕಿರುವ ಬಡ ನೌಕರರನ್ನು ಪುನಃ ಕೆಲಸಕ್ಕೆ ನೇಮಕ ಮಾಡಿಕೊಳ್ಳಲು ಸರ್ಕಾರ ಕ್ರಮ ಕೈಗೊಳ್ಳುತ್ತದೆಯೇ?

6) ಇಲ್ಲದಿದ್ದಲ್ಲಿ, ಕಾರಣಗಳೇನು?

ಶ್ರೀ ಇ.ಟಿ. ಶಂಭುನಾಥ್ (ಅರಣ್ಯ ರಾಜ್ಯ ಸಚಿವರು) :

1) ಒಟ್ಟು ದಿನಗೂಲಿ ನೌಕರರ ಸಂಖ್ಯೆ 174

ತಾಲ್ಲೂಕುವಾರು ಮಾಹಿತಿ

i. ಬಸವಕಲ್ಯಾಣ - 49

ii. ಬೀದರ್ - 36

iii. ಹುಮ್ನಾಬಾದ್ - 49

iv. ಭಾಲ್ಕಿ - 24

v. ಔರಾದ್ - 16

ಒಟ್ಟು 174

2) (i) 240 ದಿನಗಳಿಂದ ಕೆಲಸ ಮಾಡುತ್ತಿರುವ ದಿನಗೂಲಿ ನೌಕರರುಗಳ ಸಂಖ್ಯೆ 81

(ii) ಉಳಿದವರ ಸಂಖ್ಯೆ 93

3) ಅರಣ್ಯ ಇಲಾಖೆಯಲ್ಲಿ ಒಟ್ಟು 28 ಮಂದಿಯನ್ನು ಕೆಲಸದಿಂದ ತೆಗೆದುಹಾಕಲಾಗಿದೆ.

4) ಸರ್ಕಾರದ ಆದೇಶ ದಿನಾಂಕ 6-8-90ರ ಪ್ರಕಾರ ದಿನಾಂಕ 1-7-84ರ ನಂತರ ಕೆಲಸ ಮಾಡುತ್ತಿರುವ ದಿನಗೂಲಿ ನೌಕರರನ್ನು ತೆಗೆದುಹಾಕಿದ್ದು ಮತ್ತು ಕೆಲವು ಇಲಾಖಾ ಕೆಲಸಗಳು ಕಡಿಮೆ ಇದ್ದ ಪ್ರಯುಕ್ತ ಮೇಲೆ ನಮೂದಿಸಿದ ದಿನಗೂಲಿ ನೌಕರರನ್ನು ತೆಗೆದುಹಾಕಲಾಗಿದೆ.

5) ಉಚ್ಚ ನ್ಯಾಯಾಲಯದ ತಡೆಯಾಜ್ಞೆ ದಿನಾಂಕ 20-10-90ರ ಪ್ರಕಾರ 240 ದಿನ ಕೆಲಸ ಮಾಡ್ದಿದ ದಿನಗೂಲಿ ನೌಕರರನ್ನು ಪುನಃ ಸೇವೆಗೆ ತೆಗೆದುಕೊಳ್ಳಲು ಸಂಬಂಧಪಟ್ಟ ಉಪ ಅರಣ್ಯ ಸಂರಕ್ಷಣಾಧಿಕಾರಿಗಳಿಗೆ ಈ ಕಛೇರಿಯಿಂದ ದಿನಾಂಕ 23-2-90ರಲ್ಲಿ ಆದೇಶ ಮಾಡಲಾಗಿದೆ.

6) ಉದ್ಭವಿಸುವುದಿಲ್ಲ.

ಸಹಕಾರಿ ಸಂಘಗಳಿಗೆ ಚುನಾವಣೆಗಳನ್ನು ನಡೆಸುವ ಬಗ್ಗೆ ತಡೆಯಾಜ್ಞೆ

639 - ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) : ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಹಕಾರ ಸಂಘಗಳಿಗೆ ಚುನಾವಣೆ ನಡೆಸುವ ಬಗ್ಗೆ ಉಚ್ಚ ನ್ಯಾಯಾಲಯವು ತಡೆಯಾಜ್ಞೆ ನೀಡಿರುವುದು ನಿಜವೇ?